ಅಧ್ಯಕ್ಷರು:– ಶ್ರೀ ಚಲುವರಾಯಸ್ವಾಮಿ, ಶ್ರೀ ಹೆಚ್.ಡಿ. ರೇವಣ್ಣ, ಶ್ರೀ ಹೆಚ್.ಸಿ. ಬಾಲಕೃಷ್ಣರವರು ಕೂಡ ಇಲ್ಲ.

(ಶ್ರೀ ಚಲುವರಾಯಸ್ವಾಮಿ, ಶ್ರೀ ಹೆಚ್.ಡಿ. ರೇವಣ್ಣ ಮತ್ತು ಶ್ರೀ ಹೆಚ್.ಸಿ. ಬಾಲಕೃಷ್ಣರವರು ಸದನದಲ್ಲಿ ಹಾಜರಿರಲಿಲ್ಲ)

7. ಮಾನ್ಯ ಮುಖ್ಯಮಂತ್ರಿಗಳ ಹೇಳಿಕೆ:–

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ತಮ್ಮ ಅನುಮತಿಯೊಂದಿಗೆ ಮೆಟ್ರೋ ರೈಲಿನ ಬಗ್ಗೆ ಒಂದು ಸಣ್ಣ ಹೇಳಿಕೆಯನ್ನು ಮಾಡುತ್ತಿದ್ದೇನೆ.

(ಮಾನ್ಯ ಮುಖ್ಯಮಂತ್ರಿಗಳ ಹೇಳಿಕೆಯ ಲಿಖಿತ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ.)

- ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತವು ಅಕ್ಟೋಬರ್ 2011 ರಿಂದ ಬೈಯಪ್ಪನಹಳ್ಳಿಯಿಂದ ಮಹಾತ್ಮ ಗಾಂಧಿ ರಸ್ತೆಯವರೆಗೆ 6.75 ಕಿ.ಮೀ. ಮೆಟ್ರೋ ಮಾರ್ಗದಲ್ಲಿ ಸಂಚಾರ ಪ್ರಾರಂಭಿಸಲಾಗಿತ್ತು.
- ಸಂಪಿಗೆ ರಸ್ತೆಯಿಂದ ಪೀಣ್ಯವರೆಗಿನ ರೀಚ್–3 ಮತ್ತು 3ಎ (Reach - 3 & 3A) 10.3 ಕಿ.ಮೀ. ಉದ್ದದ ಮಾರ್ಗದಲ್ಲಿ ಒಟ್ಟು 10 ನಿಲ್ದಾಣಗಳು ಇರುತ್ತವೆ.
- ರೈಲ್ವೆ ಸುರಕ್ಷತಾ ಆಯುಕ್ತರು, ಬೆಂಗಳೂರು, ಇವರು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತವು ಕೈಗೊಂಡ ಮೆಟ್ರೊ ಕಾಮಗಾರಿ ಮತ್ತು ಅದರ ಸುರಕ್ಷತೆ ಇವುಗಳನ್ನು ಪರಿಶೀಲಿಸಿ ದಿನಾಂಕ 18.02.2014 ರಂದು ಬೆಂಗಳೂರು ಮೆಟ್ರೋ ರೈಲು ನಿಗಮಕ್ಕೆ ಸಂಪಿಗೆ ರಸ್ತೆಯಿಂದ ಪೀಣ್ಯವರೆಗಿನ ಮೆಟ್ರೋ ರೈಲು ಸಂಚಾರಕ್ಕೆ ಅನುಮತಿಯನ್ನು ನೀಡಿರುತ್ತಾರೆ.

- ಬೆಂಗಳೂರು ಮೆಟ್ರೊ ರೈಲು ನಿಗಮ ನಿಯಮಿತವು ಸಂಪಿಗೆ ರಸ್ತೆಯಿಂದ ಪೀಣ್ಯವರೆಗಿನ ಮೆಟ್ರೊ ರೈಲು ಮಾರ್ಗವನ್ನು ಸಾರ್ವಜನಿಕರಿಗೆ ಸಂಚಾರಕ್ಕೆ ಶೀಘ್ರದಲ್ಲಿಯೇ ಮುಕ್ತಗೊಳಿಸಲಾಗುವುದು.

ಶ್ರೀ ಸಿದ್ದರಾಮಯ್ಯ:– ಎರಡನೆ ಹಂತದಲ್ಲಿಯೂ ಕೂಡ ಕೇಂದ್ರ ಸರ್ಕಾರ 26,450 ಕೋಟಿ ರೂಪಾಯಿಗಳಿಗೆ ಒಪ್ಪಿಗೆ ಕೊಟ್ಟಿದೆ. ಕೇಂದ್ರ ಸರ್ಕಾರಕ್ಕೆ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ.

ಅಧ್ಯಕ್ಷರು:– ದಿನಾಂಕ:20–2–2014 ರಂದು ಬೆಳಿಗ್ಗೆ 11.00 ಗಂಟೆಗೆ ಪುನಃ ಸಮಾವೇಶಗೊಳ್ಳುವಂತೆ ಸದನವನ್ನು ಮುಂದೂಡಲಾಗಿದೆ.

(ಸದನವು ಸಂಜೆ 5 ಗಂಟೆ 55 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ:20–02–2014ರಂದು ಬೆಳಿಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು)